# BICYCLE RIDE

**12-Oct-2018**

**ಪಾರಂಪರಿಕ ಸೈಕಲ್ ಸವಾರಿ ಕಾರ್ಯಕ್ರಮದ ವರದಿ**

ವಿಶ್ವವಿಖ್ಯಾತ ಮೈಸೂರು ದಸರಾ ೨೦೧೮ರ ಅಂಗವಾಗಿ ಕರ್ನಾಟಕ ಸರ್ಕಾರದ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ವತಿಯಿಂದ ದಿನಾಂಕ:೧೨.೧೦.೨೦೧೮ರಂದು ಹಮ್ಮಿಕೊಂಡಿದ್ದ ಪಾರಂಪರಿಕ ಸೈಕಲ್ ಸವಾರಿ ಕಾರ್ಯಕ್ರಮದಲ್ಲಿ ಕಾಲೇಜಿನ ಇತಿಹಾಸ ವಿಭಾಗ ಮುಖ್ಯಸ್ಥರಾದ ಪ್ರೊ. ಕೆ.ಎಸ್.ಸವಿತ ಮತ್ತು ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಯಮುನ.ಎಂ.ಜೆ ಅವರ ನೇತೃತ್ವದಲ್ಲಿ ನಮ್ಮ ಕಾಲೇಜಿನ ಪದವಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವರು ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಸನ್ಮಾನ್ಯ ಶ್ರೀ.ಜಿ.ಟಿ.ದೇವೇಗೌಡರವರು ಹಾಗೂ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರಾದ ಸನ್ಮಾನ್ಯ ಶ್ರೀ.ಸಾ.ರಾ.ಮಹೇಶ್ ಅವರು ಸೈಕಲ್ ತುಳಿಯುವ ಮುಖೇಣ ಉದ್ಘಾಟಿಸಿದರು.

ಸೈಕಲ್ ಸವಾರಿಯು ಪುರಭವನದಿಂದ ಪ್ರಾರಂಭವಾಗಿ ಹತ್ತನೇ ಚಾಮರಾಜ ಒಡೆಯರ್ ವೃತ್ತ, ಅಂಬಾವಿಲಾಸ ಅರಮನೆ, ನಾಲ್ಕನೇ ಕೃಷ್ಣರಾಜ ಒಡೆಯರ್ ವೃತ್ತ, ಲ್ಯಾನ್ಸ್‌ಡೌನ್ ಕಟ್ಟಡ, ಜಗನ್ ಮೋಹನ ಅರಮನೆ, ಪರಕಾಲ ಮಠ, ಶೇಷಾದ್ರಿ ಹೌಸ್, ಪದ್ಮಾಲಯ, ಚಾಮುಂಡಿ ಅತಿಥಿ ಗೃಹ, ಪ್ರಾಚ್ಯವಿದ್ಯಾಸೌಧ, ಕ್ರಾಫರ್ಡ್ ಹಾಲ್, ಜಿಲ್ಲಾಧಿಕಾರಿಗಳ ಕಛೇರಿ, ಮಹಾರಾಜ ಕಾಲೇಜು, ಮೆಟ್ರೋಪೋಲ್ ವೃತ್ತ, ರೈಲ್ವೆ ನಿಲ್ದಾಣದ ಮೂಲಕ ಸಾಗಿ ಮೈಸೂರು ಮೆಡಿಕಲ್ ಕಾಲೇಜು ವೃತ್ತದಲ್ಲಿ ಮುಕ್ತಾಯವಾಯಿತು. ಸೈಕಲ್ ಸವಾರಿಯ ನಂತರ ವಿದ್ಯಾರ್ಥಿಗಳಿಗೆ ಲಘು ಉಪಹಾರದ ವ್ಯವಸ್ಥೆಯ ಜೊತೆಗೆ ಪ್ರಮಾಣ ಪತ್ರಗಳನ್ನು ಪರಂಪರ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ನಿರ್ಮಲ ಮಠಪತಿಯವರು ವಿತರಿಸಿದರು.












ಕರ್ನಾಟಕ ಸರ್ಕಾರ

**ಉಪ ನಿರ್ದೇಶಕರ ಕಛೇರಿ (ಪರಂಪರೆ)**
ಪುರಾತತ್ವ, ಸಂಗ್ರಹಾಲಯಗಳು
ಮತ್ತು ಪರಂಪರೆ ಇಲಾಖೆ
ಅರಮನೆ ಆವರಣ, ಮೈಸೂರು – 570001
ದೂ: 0821–2424671, ಟೆಲಿಫ್ಯಾಕ್ಸ್: 0821–2422671
e-mail: ddheritagemysore@gmail.com

ಸಂಖ್ಯೆ : ಪುಸಂಪ / ಉನಿ(ಪ) / ಪ್ರಮಾಣ ಪತ್ರ / 2018–19
ಲಗತ್ತು: ಭಾಗವಹಿಸಿರುವವರ ಪಟ್ಟಿ)

ದಿನಾಂಕ : 11.10.2018

ಗೆ:

ಪ್ರಾಂಶುಪಾಲರು,
ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು,
ಮೈಸೂರು–570001.

ಮಾನ್ಯರೇ,

ವಿಷಯ: ಪಾರಂಪರಿಕ ಸೈಕಲ್ ಸವಾರಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಮಾಣಪತ್ರಗಳನ್ನು ಸ್ವೀಕರಿಸಿರುವ ಕುರಿತು.

*****

ದಿನಾಂಕ : 12.10.2018ರಂದು ವಿಶ್ವವಿಖ್ಯಾತ ಮೈಸೂರು ದಸರಾ 2018ರ ಅಂಗವಾಗಿ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ವತಿಯಿಂದ ಹಮ್ಮಿಕೊಂಡಿದ್ದ **"ಪಾರಂಪರಿಕ ಸೈಕಲ್ ಸವಾರಿ"** ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿರುವುದಕ್ಕೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಿಚ್ಛಿಸುತ್ತೇನೆ. ಹಾಗೂ ಒಟ್ಟು 36(ಮೂವತ್ತಾರು) ಪ್ರಮಾಣ ಪತ್ರಗಳನ್ನು ಸ್ವೀಕರಿಸಲು ಕೋರಿದೆ.

ತಮ್ಮ ವಿಶ್ವಾಸಿ,

ಉಪ ನಿರ್ದೇಶಕರು(ಪರಂಪರೆ),
ಪುರಾತತ್ವ, ಸಂಗ್ರಹಾಲಯಗಳು ಮತ್ತು
ಪರಂಪರೆ ಇಲಾಖೆ, ಮೈಸೂರು.